# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 49(127) |
| ಸದಸ್ಯರ ಹೆಸರು | : | ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನ ಸಭೆಯಿಂದ ಚುನಾಯಿತರಾದವರು |
| ಉತ್ತರಿಸುವ ದಿನಾಂಕ | : | 15.07.2024 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದೊಂದಿಗೆ ಸಂಯೋಜನೆ ಹೊಂದಿರುವ ಕಾಲೇಜುಗಳ ಸಂಖ್ಯೆ ಎಷ್ಟು; ಈ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದೊಂದಿಗೆ ಸಂಯೋಜನೆ ಹೊಂದಿರುವ ಕಾಲೇಜುಗಳ ಸಂಖ್ಯೆ : 211.<br><br>ಈ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪದವಿ ವಿದ್ಯಾರ್ಥಿಗಳ ಸಂಖ್ಯೆ : 82,122<br>ಸ್ನಾತಕೋತ್ತರ ವಿದ್ಯಾರ್ಥಿಗಳ ಸಂಖ್ಯೆ : 16,198. |
| ಆ) | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಅಂಕಪಟ್ಟಿಯನ್ನು ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ಕಾಲಮಿತಿಯಲ್ಲಿ ವಿತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂಕಪಟ್ಟಿಯನ್ನು ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ವಿತರಿಸದಿರುವುದರಿಂದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಮತ್ತು ಉದ್ಯೋಗದಿಂದ ವಂಚಿತರಾಗುತ್ತಿದ್ದು, ಈ ವಿಳಂಬಕ್ಕೆ ಹೊಣೆಗಾರರಾದ ವಿಶ್ವವಿದ್ಯಾಲಯದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಎಲ್ಲಾ ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳನ್ನು ಸಮರ್ಪಕವಾಗಿ ವಿತರಿಸುತ್ತಿದೆ.<br><br>ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು 1998 ರಿಂದ ಪ್ರಾರಂಭವಾಗಿ 2023ರಲ್ಲಿ ರಜತ ಮಹೋತ್ಸವವನ್ನು ಆಚರಿಸಿಕೊಂಡಿದೆ. ಇದೇ ಮೊದಲ ಬಾರಿ ಎಲ್ಲಾ ಅಂತಿಮ ವರ್ಷದ ವಿದ್ಯಾರ್ಥಿಗಳ ಪರೀಕ್ಷೆ ಮುಗಿದ ಕೇವಲ 03 ಗಂಟೆಗಳಲ್ಲಿ ಫಲಿತಾಂಶ ಪ್ರಕಟಿಸಲಾಗಿದೆ. ಇದು ರಾಷ್ಟ್ರೀಯ ಸುದ್ದಿಯಾಗಿ ಎಲ್ಲಾ ಮಾಧ್ಯಮಗಳು ಬಿತ್ತರಿಸಿವೆ. ಇಲ್ಲಿಯವರೆಗೆ 03 ಲಕ್ಷ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರಗಳನ್ನು ಹಾಗೂ ಅಂಕಪಟ್ಟಿಗಳನ್ನು ನ್ಯಾಡ (NAD) ನಲ್ಲಿ ಹಾಕಲಾಗಿದೆ. ವಿದ್ಯಾರ್ಥಿಗಳ ವಿನಂತಿಯ ಮೇರೆಗೆ ತಾತ್ಕಾಲಿಕ ಪ್ರಮಾಣ (PDC) ಪತ್ರ, ಅಂಕಪಟ್ಟಿ ಹಾಗೂ ಟ್ರಾನ್ಸ್ಕ್ರಿಪಟ್ (Transcript) ಗಳನ್ನು ಫಲಿತಾಂಶ ಬಂದ 24 ಗಂಟೆಗಳಲ್ಲಿ ONLINE ನಲ್ಲಿ ವಿತರಿಸಲಾಗಿದೆ. |

| | | |
|---|---|---|
| | | ಹಾಗೇ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ಉನ್ನತ ಶಿಕ್ಷಣ ಮತ್ತು ಉದ್ಯೋಗದ ಹಿತದೃಷ್ಟಿಯಿಂದ 2023ನೇ ಸಾಲಿನಿಂದ ವಿಶ್ವವಿದ್ಯಾಲಯವು ಪ್ರತಿ ವರ್ಷ 02 ಬಾರಿ ಘಟಿಕೋತ್ಸವ ಮಾಡಿ ಪದವಿ ಪ್ರಮಾಣ ಪತ್ರಗಳನ್ನು ನೀಡಲಾಗುತ್ತಿದೆ. |
| **ಇ)** | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ತಾಂತ್ರಿಕ ಶಿಕ್ಷಣ ಪೂರೈಸಿದ ಯಾವ ಶೈಕ್ಷಣಿಕ ವರ್ಷದ ವಿದ್ಯಾರ್ಥಿಗಳಿಗೆ ಅಂಕಪಟ್ಟಿಯನ್ನು ವಿತರಿಸಲಾಗಿದೆ, ವಿಳಂಬಕ್ಕೆ ಕಾರಣಗಳೇನು? | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು 2022-23ನೇ ಸಾಲಿನವರೆಗೆ ಉತ್ತೀರ್ಣರಾದ ಪದವೀಧರರಿಗೆ ಈಗಾಗಲೇ ಅಂಕಪಟ್ಟಿಗಳನ್ನು ಹಾಗೂ ಪದವಿ ಪ್ರಮಾಣ ಪತ್ರವನ್ನು ಸಹ ವಿತರಿಸಲಾಗಿದ್ದು, ಯಾವುದೇ ವಿಳಂಬವಾಗಿರುವುದಿಲ್ಲ. |

**ಸಂಖ್ಯೆ: ಇಡಿ 350 ಟಿಇಸಿ 2024**

**(ಡಾ.ಎಂ.ಸಿ.ಸುಧಾಕರ್)**
**ಉನ್ನತ ಶಿಕ್ಷಣ ಸಚಿವರು**

ಡಾ.ಎಂ.ಸಿ. ಸುಧಾಕರ್
ಉನ್ನತ ಶಿಕ್ಷಣ ಸಚಿವರು